ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

29

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ - ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ಲೋಕಮತ ದಿನಾಂಕ : DATE 1/2/2021

ಫೆ.1ರಂದು ಇ-ಬಜೆಟ್

ನವದೆಹಲಿ: ದೇಶದ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಕೇಂದ್ರ ಮುಂಗಡ ಪತ್ರ ಕಾಗದ ರಹಿತವಾಗಿ ಇರಲಿದೆ. ಕೊರೊನಾ ಸೋಂಕಿನ ಹಿನ್ನೆಲೆಯಲ್ಲಿ ಈ ನಿರ್ಧಾರಕ್ಕೆ ಬರಲಾಗಿದೆ. ಲೋಕಸಭೆ ಮತ್ತು ರಾಜ್ಯಸಭೆಯ 750 ಮಂದಿ ಸಂಸದರಿಗೆ ಸೋಂಕಿನ ಹಿನ್ನೆಲೆಯಲ್ಲಿ ಆನ್‌ಲೈನ್‌ನಲ್ಲಿ ಬಜೆಟ್ ಮತ್ತು ಆರ್ಥಿಕ ಸಮೀಕ್ಷೆಯ ಪ್ರತಿಗಳನ್ನು ವೀಕ್ಷಿಸಲು ಅವಕಾಶ ಮಾಡಿಕೊಡಲಾಗುತ್ತದೆ. ಹೀಗಾಗಿ, ಸಂಸತ್ ಸದಸ್ಯರು ಮತ್ತು ಇತರರಿಗೆ ಬಜೆಟ್ ಮತ್ತು ಆರ್ಥಿಕ ಸಮೀಕ್ಷೆಯ ಮುದ್ರಿತ ಪ್ರತಿಗಳನ್ನು ನೀಡಲಾಗುವುದಿಲ್ಲ . ಪ್ರತಿ ವರ್ಷ ಕೇಂದ್ರ ವಿತ್ತ ಸಚಿವಾಲಯದ ಮುದ್ರಣಾಲಯದಲ್ಲಿಯೇ 100 ಮಂದಿ ಅಧಿಕಾರಿಗಳು, ಸಚಿವರು ಮತ್ತು ಇತರ ಸಿಬ್ಬಂದಿ ಹದಿನೈದು ದಿನಗಳ ಕಾಲ ವಾಸ್ತವ್ಯ ಹೂಡಿ, ಬಜೆಟ್ ಸಿದ್ಧತೆ ಮತ್ತು ಮುದ್ರಣ ಕಾರ್ಯಗಳಲ್ಲಿ ನಿರತರಾಗಿರುತ್ತಾರೆ. ಇತ್ತೀಚೆಗಷ್ಟೇ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ 'ಫೆ.1ರಂದು ಮಂಡನೆಯಾಗಲಿರುವ ಬಜೆಟ್ ಹಿಂದಿನ ವರ್ಷಗಳಿಗಿಂತ ಭಿನ್ನವಾಗಿ ಇರಲಿದೆ' ಎಂದು ಹೇಳಿದ್ದರು.

- **ಸೋಂಕಿನ ಹಿನ್ನೆಲೆಯಲ್ಲಿ ಆರ್ಥಿಕ ಸಮೀಕ್ಷೆ, ಬಜೆಟ್ ಮುದ್ರಣವಿಲ್ಲ**